# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 421

ಸದಸ್ಯರ ಹೆಸರು : ಶ್ರೀ ಚಿದಾನಂದ ಎಂ. ಗೌಡ (ಪದವೀಧರರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 30/01/2026

ಉತ್ತರಿಸಬೇಕಾದ ಸಚಿವರು : ಕೃಷಿ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ ಐದು ವರ್ಷಗಳಲ್ಲಿ ರಾಜ್ಯ ಸರ್ಕಾರ ಕೃಷಿ ಯಾಂತ್ರೀಕರಣಕ್ಕಾಗಿ ಮೀಸಲಿರಿಸಿದ ಅನುದಾನವೆಷ್ಟು; ಮತ್ತು ಬಿಡುಗಡೆ ಮಾಡಿರುವ ಅನುದಾನವೆಷ್ಟು; (ವರ್ಷವಾರು ವಿವರ ನೀಡುವುದು)</td><td>ಕಳೆದ ಐದು ವರ್ಷಗಳಲ್ಲಿ ರಾಜ್ಯ ಸರ್ಕಾರ ಕೃಷಿ ಯಾಂತ್ರೀಕರಣಕ್ಕಾಗಿ ಮೂಲ ಆಯವ್ಯಯದಲ್ಲಿ ಮೀಸಲಿರಿಸಿದ ಅನುದಾನ ಮತ್ತು ಬಿಡುಗಡೆ ಮಾಡಿರುವ ಅನುದಾನದ ವಿವರ ಈ ಕೆಳಕಂಡಂತಿದೆ.<br>(ಆರ್ಥಿಕ:ರೂ.ಕೋಟಿಗಳಲ್ಲಿ)<br>
<table>
<tr><th>ಕ್ರ. ಸಂ</th><th>ವರ್ಷ</th><th>ಮೀಸಲಿರಿಸಿದ ಅನುದಾನ</th><th>ಬಿಡುಗಡೆಯಾದ ಅನುದಾನ</th></tr>
<tr><td>1.</td><td>2020-21</td><td>344.55</td><td>393.71</td></tr>
<tr><td>2.</td><td>2021-22</td><td>251.19</td><td>431.05</td></tr>
<tr><td>3.</td><td>2022-23</td><td>406.42</td><td>296.85</td></tr>
<tr><td>4.</td><td>2023-24</td><td>370.54</td><td>504.02</td></tr>
<tr><td>5.</td><td>2024-25</td><td>354.40</td><td>430.67</td></tr>
<tr><td colspan="2">ಒಟ್ಟು</td><td>1727.10</td><td>2056.30</td></tr>
</table></td></tr>
<tr><td>ಆ)</td><td>ಕೃಷಿ ಯಂತ್ರೋಪಕರಣಗಳ ಸಬ್ಸಿಡಿ ಪಡೆಯಲು ರೈತರಿಗೆ ಇರಬೇಕಾದ ಅರ್ಹತೆಯೇನು; ಯಾವ ರೀತಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು;</td><td>ಕೃಷಿ ಯಂತ್ರೋಪಕರಣಗಳ ಸಬ್ಸಿಡಿ ಪಡೆಯಲು ರೈತರಿಗೆ ಇರಬೇಕಾದ ಅರ್ಹತೆಗಳು ಮತ್ತು ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಈ ಕೆಳಕಂಡಂತಿದೆ.<br>1. ಅರ್ಜಿದಾರರು ತಮ್ಮ ಹೆಸರಿನಲ್ಲಿ ಪಹಣಿ ಹೊಂದಿದ ರೈತರಾಗಿರಬೇಕು.<br>2. FRUITS (Farmers Registration and Unified Beneficiary Information System) Portal ತಂತ್ರಾಂಶದಲ್ಲಿ ನೋಂದಾಯಿಸಿಕೊಂಡಿರಬೇಕು.</td></tr>
</table>

| | | |
|---|---|---|
| | | 3. ಟ್ರ್ಯಾಕ್ಟರ್ ಚಾಲಿತ ಉಪಕರಣಗಳಿಗೆ ರೈತರು ತಮ್ಮ ಹೆಸರಿನಲ್ಲಿ ಟ್ರ್ಯಾಕ್ಟರ್ ಹೊಂದಿರುವ ದಾಖಲಾತಿ(RC) ಇರಬೇಕು.<br>4. ರೈತರು ಯಾವುದಾದರು ಉಪಕರಣಕ್ಕೆ ಸಹಾಯಧನವನ್ನು ಕೃಷಿ ಇಲಾಖೆ ಮತ್ತು ಕೃಷಿ ಸಂಬಂಧಿತ ಇಲಾಖೆಗಳ ಮೂಲಕ ಪಡೆದಿದ್ದಲ್ಲಿ, ಅದೇ ಉಪಕರಣವನ್ನು ಮುಂದಿನ ಏಳು ಆರ್ಥಿಕ ವರ್ಷಗಳಲ್ಲಿ ಸಹಾಯಧನ ಪಡೆಯಲು ಅರ್ಹರಿರುವುದಿಲ್ಲ.<br>5. ರೈತರು ಸಲ್ಲಿಸುವ ಅರ್ಜಿಗಳ ಜೇಷ್ಠತೆ, ರೈತರ ವರ್ಗದ ಮತ್ತು ಅನುದಾನ ಲಭ್ಯತೆ ಆಧಾರದ ಮೇಲೆ ಕೆ.ಕಿಸಾನ್ ತಂತ್ರಾಂಶದಲ್ಲಿ ರೈತರನ್ನು ಆಯ್ಕೆ ಮಾಡಿ ಸರಬರಾಜು ಆದೇಶ ನೀಡಲಾಗುವುದು. |
| ಇ) | ಕೃಷಿ ಯಾಂತ್ರೀಕರಣಕ್ಕಾಗಿ ರೈತರಿಗೆ ನೀಡುವ ಸಬ್ಸಿಡಿಯ ಮೊತ್ತವೆಷ್ಟು; | ಕೃಷಿ ಯಾಂತ್ರೀಕರಣ ಯೋಜನೆಯಡಿ ಉಳುಮೆಯಿಂದ ಕೊಯ್ಲಿನವರೆಗೆ ಉಪಯುಕ್ತವಾಗುವ ವಿವಿಧ ಕೃಷಿ ಉಪಕರಣಗಳನ್ನು ಸಹಾಯಧನದಡಿ ರೈತರಿಗೆ ಒದಗಿಸಲಾಗುತ್ತಿದೆ. ಇದರಲ್ಲಿ ಸಾಮಾನ್ಯ ರೈತರಿಗೆ ಶೇ.50ರಷ್ಟು ಹಾಗೂ ಪರಿಶಿಷ್ಟ ಜಾತಿ ಮತ್ತು ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಠ ಮಿತಿ ರೂ.1.00 ಲಕ್ಷ ಸಹಾಯಧನವನ್ನು ಒದಗಿಸಲಾಗುತ್ತಿದೆ.<br>ಟ್ರ್ಯಾಕ್ಟರ್ ಗಳಿಗೆ (45 ಪಿ.ಟಿ.ಒ ಹೆಚ್.ಪಿ ವರೆಗೆ) ಸಾಮಾನ್ಯ ರೈತರಿಗೆ ರೂ. 0.75 ಲಕ್ಷ ಹಾಗೂ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ರೈತರಿಗೆ ಶೇ 90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ. |
| ಈ) | ಕಳೆದ ಐದು ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಕೃಷಿ ಯಾಂತ್ರೋಪಕರಣಗಳ ಸಬ್ಸಿಡಿಗಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಕೋರಿದ ಮೊತ್ತವೆಷ್ಟು; ಸರ್ಕಾರದಿಂದ ಬಿಡುಗಡೆಯಾದ ಮೊತ್ತವೆಷ್ಟು; (ವರ್ಷವಾರು ತಾಲ್ಲೂಕುವಾರು ನೀಡುವುದು) | ಕಳೆದ ಐದು ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಕೃಷಿ ಯಂತ್ರೋಪಕರಣಗಳ ಸಬ್ಸಿಡಿಗಾಗಿ 15823 ಅರ್ಜಿಗಳು ಸ್ವೀಕೃತವಾಗಿರುತ್ತವೆ. ಜಿಲ್ಲೆಯಿಂದ ರೂ.10990.00 ಲಕ್ಷಗಳನ್ನು ಕೋರಲಾಗಿದ್ದು, ಸರ್ಕಾರದಿಂದ ರೂ.10203.37 ಲಕ್ಷ ಅನುದಾನ ಬಿಡುಗಡೆಯಾಗಿರುತ್ತದೆ. ವರ್ಷವಾರು ಮತ್ತು ತಾಲ್ಲೂಕುವಾರು ವಿವರವನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ. |

| | | |
|---|---|---|
| ಉ) | ಕೃಷಿ ಯಾಂತ್ರೀಕರಣ ಪ್ರೋತ್ಸಾಹಿಸಲು ಮತ್ತು ಯುವಕರನ್ನು ಕೃಷಿಯತ್ತ ಆಕರ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಕೃಷಿ ಯಾಂತ್ರೀಕರಣ ಪ್ರೋತ್ಸಾಹಿಸಲು ಮತ್ತು ಯುವಕರನ್ನು ಕೃಷಿಯತ್ತ ಆಕರ್ಷಿಸಲು ಕೃಷಿ ಇಲಾಖೆಯಿಂದ ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ-e2ರಲ್ಲಿ ಒದಗಿಸಲಾಗಿದೆ. |

ಸಂಖ್ಯೆ: AGRI/18/ASC/2025

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು

ಅನುಬಂಧ-1

LAQ:421(371), ಕಳೆದ ಐದು ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಕೃಷಿ ಯಾಂತ್ರೋಪಕರಣಗಳ ಸಬ್ಸಿಡಿಗಾಗಿ ಬಂದ ಅರ್ಜಿಗಳ ಸಂಖ್ಯೆ, ಕೋರಿದ ಮೊತ್ತ, ಸರ್ಕಾರದಿಂದ ಬಿಡುಗಡೆಯಾದ ಮೊತ್ತ, (ವರ್ಷವಾರು ತಾಲ್ಲೂಕುವಾರು ವಿವರಗಳು) (ರೂ.ಲಕ್ಷಗಳಲ್ಲಿ).

| ಕ್ರ. ಸಂ. | ತಾಲ್ಲೂಕು | 2020-21 | | | 2021-22 | | | 2022-23 | | | 2023-24 | | | 2024-25 | | | ಒಟ್ಟು | | |
|---|---|---|---|---|---|---|---|---|---|---|---|---|---|---|---|---|---|---|---|
| | | ಬಂದ ಅರ್ಜಿಗಳ ಸಂಖ್ಯೆ | ಕೋರಿದ ಮೊತ್ತ | ಅನುದಾನ ಬಿಡುಗಡೆ | ಬಂದ ಅರ್ಜಿಗಳ ಸಂಖ್ಯೆ | ಕೋರಿದ ಮೊತ್ತ | ಅನುದಾನ ಬಿಡುಗಡೆ | ಬಂದ ಅರ್ಜಿಗಳ ಸಂಖ್ಯೆ | ಕೋರಿದ ಮೊತ್ತ | ಅನುದಾನ ಬಿಡುಗಡೆ | ಬಂದ ಅರ್ಜಿಗಳ ಸಂಖ್ಯೆ | ಕೋರಿದ ಮೊತ್ತ | ಅನುದಾನ ಬಿಡುಗಡೆ | ಬಂದ ಅರ್ಜಿಗಳ ಸಂಖ್ಯೆ | ಕೋರಿದ ಮೊತ್ತ | ಅನುದಾನ ಬಿಡುಗಡೆ | ಬಂದ ಅರ್ಜಿಗಳ ಸಂಖ್ಯೆ | ಕೋರಿದ ಮೊತ್ತ | ಅನುದಾನ ಬಿಡುಗಡೆ |
| 1 | ಚಿಕ್ಕನಾಯಕನಹಳ್ಳಿ | 210 | 220.00 | 195.64 | 521 | 260.00 | 256.20 | 310 | 125.00 | 109.41 | 188 | 140.00 | 127.39 | 381 | 155.00 | 145.58 | 1610 | 900.00 | 834.23 |
| 2 | ಗುಬ್ಬಿ | 274 | 295.00 | 266.17 | 359 | 345.00 | 332.52 | 388 | 170.00 | 153.71 | 610 | 340.00 | 324.51 | 658 | 375.00 | 375.33 | 2289 | 1525.00 | 1452.23 |
| 3 | ಕೊರಟಗೆರೆ | 204 | 215.00 | 195.26 | 362 | 265.00 | 255.57 | 297 | 145.00 | 126.74 | 236 | 145.00 | 162.10 | 274 | 225.00 | 205.67 | 1373 | 995.00 | 945.33 |
| 4 | ಕುಣಿಗಲ್ | 205 | 220.00 | 197.83 | 321 | 235.00 | 221.82 | 375 | 140.00 | 122.41 | 431 | 295.00 | 276.24 | 335 | 255.00 | 243.15 | 1667 | 1145.00 | 1061.44 |
| 5 | ಮಧುಗಿರಿ | 200 | 205.00 | 184.96 | 373 | 250.00 | 236.32 | 253 | 150.00 | 135.50 | 266 | 175.00 | 154.94 | 224 | 185.00 | 172.90 | 1316 | 965.00 | 884.62 |
| 6 | ಪಾವಗಡ | 204 | 220.00 | 198.11 | 346 | 230.00 | 217.07 | 255 | 165.00 | 150.67 | 237 | 140.00 | 125.76 | 177 | 95.00 | 85.72 | 1219 | 850.00 | 777.32 |
| 7 | ಶಿರಾ | 260 | 275.00 | 254.36 | 422 | 390.00 | 364.61 | 362 | 170.00 | 159.21 | 400 | 225.00 | 204.08 | 354 | 315.00 | 291.84 | 1798 | 1375.00 | 1274.09 |
| 8 | ತಿಪಟೂರು | 193 | 215.00 | 192.86 | 268 | 260.00 | 240.85 | 305 | 125.00 | 115.63 | 314 | 195.00 | 179.91 | 322 | 190.00 | 173.82 | 1402 | 985.00 | 903.07 |
| 9 | ತುಮಕೂರು | 247 | 265.00 | 243.29 | 301 | 290.00 | 272.31 | 307 | 155.00 | 143.72 | 468 | 245.00 | 221.46 | 425 | 295.00 | 275.85 | 1748 | 1250.00 | 1156.64 |
| 10 | ತುರುವೇಕೆರೆ | 197 | 215.00 | 193.56 | 287 | 205.00 | 195.34 | 314 | 160.00 | 147.54 | 255 | 245.00 | 219.31 | 348 | 175.00 | 158.63 | 1401 | 1000.00 | 914.39 |
| | ಒಟ್ಟು | **2194** | **2345.00** | **2122.04** | **3560** | **2730** | **2592.60** | **3166** | **1505.00** | **1364.54** | **3405** | **2145.00** | **1995.70** | **3498** | **2265.00** | **2128.49** | **15823** | **10990.00** | **10203.37** |

LCQ-(421) 371

**ಅನುಬಂಧ-2**

ಕೃಷಿ ಯಾಂತ್ರೀಕರಣ ಪ್ರೋತ್ಸಾಹಿಸಲು ಮತ್ತು ಯುವಕರನ್ನು ಕೃಷಿಯತ್ತ ಆಕರ್ಷಿಸಲು ಕೃಷಿ ಇಲಾಖೆಯಿಂದ ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮಗಳ ವಿವರ

1. **ಕೃಷಿ ಯಾಂತ್ರೀಕರಣ:** ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ, ಈ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತದೆ.

   **ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು, ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು** ಕಡಿಮೆ ಮಾಡಿ, ಅವರ ಸಮಸ್ಯೆಯನ್ನು ನೀಗಿಸಲು, ಹೆಚ್ಚಿನ ಇಳುವರಿ ಪಡೆಯಲು ನೆರವಾಗುವಂತೆ ಸಹಕಾರಿಯಾಗಲು ಹಾಗೂ ಕ್ಷೇತ್ರ ಶಕ್ತಿಯನ್ನು (ಪ್ರಸ್ತುತವಿರುವ 2.115 KW/Ha to 2.5kW/Ha by 2023 and 4.00kW/ha by 2030) ಹೆಚ್ಚಿಸಲು ಕೃಷಿ ಯಾಂತ್ರೀಕರಣ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ರೈತರಿಗೆ ಟ್ರ್ಯಾಕ್ಟರ್ (45HP ವರೆಗೆ), ಪವರ್ ಟಿಲ್ಲರ್‌ಗಳ ಜೊತೆಗೆ ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಶಕ್ತಿ ಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಶಕ್ತಿ ಚಾಲಿತ ಅಂತರ ಬೇಸಾಯ ಉಪಕರಣಗಳು, ಕೊಯ್ಲು ಮತ್ತು ಸಂಸ್ಕರಣಾ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ಡೀಸೆಲ್ ಪಂಪ್‌ಸೆಟ್ ಗಳು ಇತ್ಯಾದಿ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. ಹೀಗೆ ಉಳುಮೆಯಿಂದ ಕೊಯ್ಲಿನವರೆಗೆ ಹಾಗೂ ಕೊಯ್ಲು ನಂತರ ಉಪಯುಕ್ತವಾಗುವ ವಿವಿಧ ನಮೂನೆಯ ಹಾಗೂ ವಿವಿಧ ರೀತಿಯ ಕೃಷಿ ಸಂಸ್ಕರಣಾ ಘಟಕಗಳನ್ನು ಸಹಾಯಧನದಡಿ ರೈತರಿಗೆ ಒದಗಿಸಲಾಗುತ್ತದೆ.

2. **ಕೃಷಿ ಸಂಸ್ಕರಣೆ:** ಈ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನ ನೀಡಲಾಗುತ್ತಿದೆ. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತದೆ.

3. **ಹೈಟೆಕ್ ಹಾರ್ವೆಸ್ಟರ್ ಹಬ್**- ಬೆಳೆ ಕಟಾವು ಪ್ರಕ್ರಿಯೆಯನ್ನು ನಿಗದಿತ ಸಮಯದಲ್ಲಿ ಕೈಗೊಳ್ಳಲು ಹಾಗೂ ಕಟಾವು ಸಮಯದಲ್ಲಿ ಬೆಳೆ ನಷ್ಟವನ್ನು ತಡೆಗಟ್ಟಲು ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಹಂತ ಹಂತವಾಗಿ ಸ್ಥಾಪಿಸಲು ರಾಜ್ಯದಲ್ಲಿ ಪ್ರಚಲಿತವಿರುವ ಕೃಷಿ ಯಂತ್ರಧಾರೆ ಕೇಂದ್ರಗಳು/ರೈತ ಉತ್ಪಾದಕ ಸಂಸ್ಥೆಗಳು/ ಸೇವಾದಾರ ಸಂಸ್ಥೆಗಳು/ ವೈಯಕ್ತಿಕ ಫಲಾನುಭವಿಗಳನ್ನು ಒಳಗೊಂಡಂತೆ ಆಯ್ಕೆ ಮಾಡಿದ ಅರ್ಹತೆಯಿರುವ ಸಂಸ್ಥೆಗಳಿಗೆ / ವೈಯಕ್ತಿಕ ಫಲಾನುಭವಿಗಳಿಗೆ Hi-Tech Harvester Hubs ಗಳಿಗೆ ಸಹಾಯಧನವನ್ನು Credit Linked Back Ended ರೂಪದಲ್ಲಿ ಒದಗಿಸಲಾಗುತ್ತಿದೆ. ಸದರಿ ಕೇಂದ್ರಗಳಲ್ಲಿ ದಾಸ್ತಾನೀಕರಿಸುವ Hi-Tech ಕಟಾವು / ಒಕ್ಕಣೆ ಯಂತ್ರಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ರಂತೆ ಗರಿಷ್ಠ ರೂ.40.00 ಲಕ್ಷದವರೆಗೆ, ಪ.ಜ/ಪ.ಪಂ. ವರ್ಗದ ರೈತರಿಗೆ ಹಾಗೂ ಸಂಘ-ಸಂಸ್ಥೆಗಳಿಗೆ (ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆ/FPO ಗಳನ್ನೊಳಗೊಂಡಂತೆ) ಶೇ.70 ರಂತೆ ಗರಿಷ್ಠ ರೂ.50.00 ಲಕ್ಷದವರೆಗೆ ಸಹಾಯಧನವನ್ನು Credit Linked Back Ended ರೂಪದಲ್ಲಿ ಒದಗಿಸಲಾಗುತ್ತಿದೆ. ಪ್ರತಿ ಒಂದು ಹೈಟೆಕ್ ಹಾರ್ವೆಸ್ಟರ್ ಹಬ್ ಘಟಕಕ್ಕೆ ಗರಿಷ್ಠ ಮೊತ್ತ ರೂ.100.00 ಲಕ್ಷಗಳು ಮೀರದಂತೆ (ರೂ.5.00 ಲಕ್ಷಗಳ ಆಡಳಿತಾತ್ಮಕ ವೆಚ್ಚ ಒಳಗೊಂಡಂತೆ) ಸಹಾಯಧನವನ್ನು ಒದಗಿಸಲಾಗುತ್ತಿದೆ. ಸದರಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುತ್ತದೆ.

4. **ಸೂಕ್ಷ್ಮ ನೀರಾವರಿ ಯೋಜನೆ:** ಈ ಕಾರ್ಯಕ್ರಮವನ್ನು ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಅನುಷ್ಠಾನ ಮಾಡಲಾಗುತ್ತಿದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಹಿಡುವಳಿಗನುಸಾರ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಶೇ.35-45 ರಷ್ಟು ಹೆಚ್ಚುವರಿ ಸಹಾಯಧನವನ್ನು ಸೇರಿಸಿ ಒಟ್ಟಾರೆ ಶೇ.90ರ ಸಹಾಯಧನದಲ್ಲಿ ಸೂಕ್ಷ್ಮ ನೀರಾವರಿ ಚಟುವಟಿಕೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.
   - ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ತುಂತುರು ನೀರಾವರಿಗೆ ಶೇ.90 ರ ಸಹಾಯಧನ ನೀಡಲಾಗುತ್ತಿದೆ.
   - ಸಣ್ಣ / ಅತಿ ಸಣ್ಣ / ಪ.ಜಾ / ಪ.ಪಂ. ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಹನಿ ನೀರಾವರಿ ಅಳವಡಿಕೆಗೆ ಶೇ.90 ರ ಸಹಾಯಧನ ನೀಡಲಾಗುತ್ತಿದೆ.
   - ಉಳಿದ ಎಲ್ಲಾ ರೈತರ ವರ್ಗಕ್ಕೆ 5.0 ಹೆಕ್ಟೇರ್ ಪ್ರದೇಶದವರೆಗೆ ಶೇ.45 ರ ಸಹಾಯಧನ ನೀಡಲಾಗುತ್ತಿದೆ.

5. **ರೈತ ಸಿರಿ:** ರೈತ ಸಿರಿ ಕಾರ್ಯಕ್ರಮದಡಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/- ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರೋತ್ಸಾಹಧನವನ್ನು ನೇರ ನಗದುವರ್ಗಾವಣೆ ಮೂಲಕ ನೀಡಲಾಗುತ್ತಿದೆ.

6. **ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ ಪ್ರಶಸ್ತಿ:**
   ಕೃಷಿ ಪಂಡಿತ ಪ್ರಶಸ್ತಿ: ಕೃಷಿ ಕ್ಷೇತ್ರದಲ್ಲಿ ವಿನೂತನ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಿಂದ ಗಮನಾರ್ಹ ಸಾಧನೆ ಮಾಡಿರುವ ಮತ್ತು ರೈತ ಸಮುದಾಯದ ಅಭಿವೃದ್ಧಿಗಾಗಿ ಕೊಡುಗೆ ನೀಡುತ್ತಿರುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪಂಡಿತ ಪ್ರಶಸ್ತಿ ನೀಡಲಾಗುತ್ತಿದೆ. ಈ ಹಿಂದೆ ಕೃಷಿ ಪಂಡಿತ ಪ್ರಶಸ್ತಿ(ಪ್ರಥಮ/ ದ್ವಿತೀಯ/ ತೃತೀಯ/ ಉದಯೋನ್ಮುಖ) ಪಡೆದವರು ಹೊರತುಪಡಿಸಿ ಉಳಿದೆಲ್ಲಾ ರೈತ ಮತ್ತು ರೈತ ಮಹಿಳೆಯರು ಕೃಷಿ ಪಂಡಿತ ಪ್ರಶಸ್ತಿಗೆ ಸ್ಪರ್ಧಿಸಬಹುದಾಗಿರುತ್ತದೆ.
   ಕೃಷಿ ಪ್ರಶಸ್ತಿ: ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸಲು ರೈತರಲ್ಲಿ ಆರೋಗ್ಯಕರ ಸ್ಪರ್ಧಾ ಮನೋಭಾವನೆಯನ್ನು ಉಂಟು ಮಾಡಿ ಅತಿ ಹೆಚ್ಚು ಇಳುವರಿ ಪಡೆಯುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪ್ರಶಸಿಯನ್ನು ನೀಡಲಾಗುತ್ತಿದೆ. ಕಳೆದ ಐದು ವರ್ಷಗಳಲ್ಲಿ ಬೆಳೆ ಸ್ಪರ್ಧೆಯಡಿ ವಿಜೇತರಾದವರನ್ನು ಹೊರತುಪಡಿಸಿ ಉಳಿದೆಲ್ಲಾ ರೈತರು ಕೃಷಿ ಪ್ರಶಸ್ತಿಗೆ ಸ್ಪರ್ಧಿಸಬಹುದಾಗಿರುತ್ತದೆ.

7. **ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ:** ರಾಜ್ಯದಲ್ಲಿ ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ದಿನಾಂಕ 01.12.2018 ರಿಂದ ಅನ್ವಯ ವಾಗುವಂತೆ ಫೆಬ್ರುವರಿ 2019 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸಾಗುವಳಿ ಭೂಮಿ ಹೊಂದಿರುವ (01.02.2019 ರಳೊಳಗಾಗಿ ಸ್ವಾಧೀನದಲ್ಲಿರುವ /ಭೂದಾಖಲೆಯಲ್ಲಿ ಹೆಸರಿರುವ) ಎಲ್ಲಾ ಅರ್ಹ ರೈತ ಕುಟುಂಬಕ್ಕೆ (ಒಂದು ಕುಟುಂಬ ಎಂದರೆ ಗಂಡ, ಹೆಂಡತಿ ಮತ್ತು ಅಪ್ರಾಪ್ತ ಮಕ್ಕಳು) ಕೃಷಿ ಚಟುವಟಿಕೆಯಲ್ಲಿ ಉತ್ತಮ ಪರಿಕರಗಳನ್ನು ಬಳಸಿ ಬೆಳೆಗಳ ಆರೋಗ್ಯ ನಿರ್ವಹಣೆ ಹಾಗೂ ಹೆಚ್ಚಿನ ಇಳುವರಿ ಪಡೆದು ನಿರೀಕ್ಷಿತ ಆದಾಯಗಳಿಸಲು ನೆರವಾಗಲು ವಾರ್ಷಿಕ ರೂ.6000/-ಗಳ ಆರ್ಥಿಕ ನೆರವನ್ನು ನೀಡಲಾಗುತ್ತಿದೆ. ಸದರಿ ಅನುದಾನವನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುತ್ತದೆ.

8. **ಕೃಷಿ ವಿಸ್ತರಣೆ (ATMA)**: ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯು ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ

ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರಿ/ ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

9. **ಚಿಲ್ಲರೆ ಗೊಬ್ಬರ ಮಾರಾಟ ಪರವಾನಗಿ ವಿತರಣೆ:** ಯುವ ಜನತೆ ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡುವ ನಿಟ್ಟಿನಲ್ಲಿ 2016ನೇ ಸಾಲಿನಿಂದ ಚಿಲ್ಲರೆ ಮಾರಾಟಗಾರರಿಗಾಗಿ ಪರವಾನಗಿ ನೀಡಲು ರಸಗೊಬ್ಬರ ನಿಯಂತ್ರಣ ಆದೇಶ 1985ರ ಪ್ರಕಾರ ಅರ್ಜಿದಾರರು ಯಾವುದೇ ರಾಜ್ಯ ಕೃಷಿ ವಿಶ್ವ ವಿದ್ಯಾಲಯ ಅಥವಾ ಕೃಷಿ ವಿಜ್ಞಾನ ಕೇಂದ್ರಗಳು ಅಥವಾ ರಾಷ್ಟ್ರೀಯ ಕೃಷಿ ವಿಸ್ತರಣೆ ನಿರ್ವಹಣೆ ಸಂಸ್ಥೆ (Manage) ಅಥವಾ ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ಸಂಸ್ಥೆಗಳಿಂದ ಕೃಷಿ ವಿಷಯಕ್ಕೆ ಸಂಬಂಧಿಸಿದಂತೆ ಹದಿನೈದು ದಿನಗಳ ಪ್ರಮಾಣ ಪತ್ರ ಕೋರ್ಸ್ ಹೊಂದಿದವರಿಗೆ ಮಾತ್ರ ಚಿಲ್ಲರೆ ಮಾರಾಟ ಪರವಾನಗಿ ನೀಡಲಾಗುತ್ತಿದೆ.

10. **ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಠಿಕ ಅಭಿಯಾನ (ಕೃಷೋನ್ನತಿ ಯೋಜನೆ) NFSNM:** ಈ ಯೋಜನೆಯಡಿ ಭತ್ತ, ದ್ವಿದಳಧಾನ್ಯ, ಒರಟುಧಾನ್ಯ, ನ್ಯೂಟ್ರಿ ಸಿರಿಧಾನ್ಯ, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಭತ್ತ, ದ್ವಿದಳಧಾನ್ಯ, ಒರಟುಧಾನ್ಯ, ನ್ಯೂಟ್ರಿ ಸಿರಿಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು ಹಾಗೂ ಜಿಪ್ಸಂ/ ಕೃಷಿ ಸುಣ್ಣ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಿಗೆ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹಧನ ನೀಡಲಾಗುತ್ತದೆ.

11. **ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-OS):** ಖಾದ್ಯ ತೈಲಗಳನ್ನು ಆಮದು ಮಾಡಿಕೊಳ್ಳುವಲ್ಲಿ ದೇಶದ ಅವಲಂಬನೆಯನ್ನು ಕಡಿಮೆ ಮಾಡಲು ಮತ್ತು ದೇಶಿಯ ಎಣ್ಣೆಕಾಳುಗಳ ಉತ್ಪಾದನೆಯನ್ನು ಹೆಚ್ಚಿಸುವ ಹಾಗೂ ರೈತರ ಆದಾಯವನ್ನು ಸುಧಾರಿಸುವುದರೊಂದಿಗೆ ಆತ್ಮನಿರ್ಭರತೆಯನ್ನು ಸಾಧಿಸುವ ಉದ್ದೇಶದಿಂದ "ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು ಯೋಜನೆ" ಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯನ್ನು ಮೌಲ್ಯ ಸರಪಳಿ ಗುಚ್ಛಗಳು ಪ್ರಾತ್ಯಕ್ಷಿಕೆಗಳು, ಮಾಹಿತಿ, ಶಿಕ್ಷಣ ಮತ್ತು ಸಂವಹನ, ಅರಿವು ಮೂಡಿಸುವ ಕುರಿತು ತರಬೇತಿ ಮತ್ತು ಕಾರ್ಯಾಗಾರಗಳು, ಜೇನುಪೆಟ್ಟಿಗೆ ವಿತರಣೆ, ಪ್ರಾಥಮಿಕ ಮತ್ತು ದ್ವಿತೀಯ ಎಣ್ಣೆಕಾಳು ಕೊಯ್ಲೋತ್ತರ ಮೂಲ ಸೌಕರ್ಯ ಸೌಲಭ್ಯ ಒದಗಿಸುವ ಘಟಕಗಳೊಂದಿಗೆ ಅನುಷ್ಠಾನಗೊಳಿಸಲಾಗುತ್ತದೆ.

12. **PM-RKVY-ಬೆಳೆ ವೈವಿಧ್ಯೀಕರಣ ಯೋಜನೆ (PM-RKVY-CDP):** ತಂಬಾಕು ಬೆಳೆಯುವ ಮುಖ್ಯ ಜಿಲ್ಲೆಗಳಾದ ಮೈಸೂರು, ಬೆಳಗಾವಿ ಮತ್ತು ಹಾಸನ ಜಿಲ್ಲೆಗಳಲ್ಲಿ ತಂಬಾಕು ಕೃಷಿಯ ಬದಲು ರೈತರನ್ನು ಕೃಷಿ ಮತ್ತು ತೋಟಗಾರಿಕೆಯ ಲಾಭದಾಯಕ ಪರ್ಯಾಯ ಬೆಳೆಗಳನ್ನು ಬೆಳೆಯಲು ಪ್ರೋತ್ಸಾಹಿಸುವುದರೊಂದಿಗೆ "ಸಮಗ್ರ ಕೃಷಿ ಪದ್ಧತಿ" ಮಾದರಿಯನ್ನು ಅಳವಡಿಸಲು ಪ್ರೇರೇಪಿಸಿ ರೈತನ ಆದಾಯ ಹೆಚ್ಚಳ ಮಾಡುವುದು ಮತ್ತು ತಂಬಾಕಿನಿಂದ ಆಗುವ ದುಷ್ಪರಿಣಾಮದ ಕುರಿತು ರೈತರಲ್ಲಿ ಅರಿವು ಮೂಡಿಸುವ ಉದ್ದೇಶದೊಂದಿಗೆ ಬೆಳೆ ಪದ್ಧತಿ ಆಧಾರಿತ ಪ್ರಾತ್ಯಕ್ಷಿಕೆಗಳು, ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗುತ್ತಿದೆ ಹಾಗೂ ಹಸಿರೆಲೆ ಗೊಬ್ಬರ ಬೀಜಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ.

13. **ಪ್ರಧಾನ ಮಂತ್ರಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮ (PM-RKVY-IFS):** ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆ, ತ್ಯಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವ ಉದ್ದೇಶದಿಂದ ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ

ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟಾರೆಯಾಗಿ 1600 ಸಮಗ್ರ ಕೃಷಿ ಪದ್ಧತಿ ಮಾದರಿಗಳನ್ನು ಅನುಷ್ಠಾನಗೊಳಿಸಲು ಕಾರ್ಯಕ್ರಮವನ್ನು ರೂಪಿಸಲಾಗಿದೆ.

14. **ಕರ್ನಾಟಕ ರೈತ ಸಮೃದ್ಧಿ ಯೋಜನೆ:** ಕೃಷಿ ಕ್ಷೇತ್ರವನ್ನು ಸುಸ್ಥಿರ ಹಾಗೂ ಲಾಭದಾಯಕವಾಗಿಸಲು ರಾಜ್ಯದ ಕೃಷಿ ಇಲಾಖೆಯಲ್ಲಿ ಪ್ರಸ್ತುತ ಅನುಷ್ಠಾನಗೊಳಿಸುತ್ತಿರುವ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳನ್ನು ಕೇಂದ್ರ ಬಿಂದುವಾಗಿರಿಸಿಕೊಂಡು ವಿವಿಧ ರೈತಪರ ಯೋಜನೆಗಳನ್ನು ಸಂಯೋಜಿಸುವ ಮೂಲಕ, ರೈತ ಮತ್ತು ರೈತ ಗುಂಪುಗಳಿಗೆ ಗುಣಮಟ್ಟದ ಉತ್ಪಾದನೆ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ರಫ್ತು ಮಾಡುವುದರ ಬಗ್ಗೆ ಸಾಮರ್ಥ್ಯ ಅಭಿವೃದ್ಧಿ ಹಾಗೂ ಅರಿವು ಮೂಡಿಸುವುದು. ರೈತರಿಗೆ ಮಣ್ಣು ಪರೀಕ್ಷೆಯ ಆಧಾರದ ಮೇಲೆ ಯಾವ ಬೆಳೆ ಬೆಳೆಯುವುದು ಹಾಗೂ ಮಾರುಕಟ್ಟೆ ಬೇಡಿಕೆಯನ್ನು ಆಧರಿಸಿ ಮಾರ್ಗದರ್ಶನ ನೀಡುವುದು...ಇತ್ಯಾದಿಗಳ ಮೂಲಕ ಆಹಾರ ಉತ್ಪಾದನೆ ಹಾಗೂ ರೈತರ ಆದಾಯವನ್ನು ಹೆಚ್ಚಿಸುವುದು ಈ ಯೋಜನೆಯ ಉದ್ದೇಶವಾಗಿದೆ.

15. **ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ (NMNF):** ನೈಸರ್ಗಿಕ ಕೃಷಿ ಪದ್ಧತಿಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ಸದರಿ ಕೇಂದ್ರ ಪುರಸ್ಕೃತ ಯೋಜನೆಯನ್ನು ರಾಜ್ಯದ 990 ಗುಚ್ಛಗಳ 49500 ಹೆ. ಪ್ರದೇಶದಲ್ಲಿ 123750 ರೈತರನ್ನು ನೈಸರ್ಗಿಕ ಕೃಷಿಗೆ ಒಳಪಡಿಸುವ ಗುರಿಯೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ.

16. **ನಮೋ ಡ್ರೋನ್ ದೀದಿ:** ಕೇಂದ್ರ ಸರ್ಕಾರವು "Namo Drone Didi" ಯೋಜನೆಯನ್ನು DAY-NRLM ಅಡಿಯಲ್ಲಿ ನೋಂದಣಿಯಾಗಿರುವ ಮಹಿಳಾ ಸ್ವಸಹಾಯ ಸಂಘಗಳಿಗೆ ಕೃಷಿ ಉದ್ದೇಶಕ್ಕಾಗಿ ರೈತರಿಗೆ ಬಾಡಿಗೆ ಆಧಾರಿತ ಸೇವೆಗಳ ಮೂಲಕ ಡ್ರೋನ್‌ಗಳನ್ನು ಒದಗಿಸಿ ಸುಸ್ಥಿರ ವ್ಯಾಪಾರ ಮತ್ತು ಜೀವನೋಪಾಯದ ಬೆಂಬಲವನ್ನು ಒದಗಿಸುವ ಉದ್ದೇಶದೊಂದಿಗೆ 2024-25 ಮತ್ತು 2025-26 ನೇ ಸಾಲಿಗೆ ಜಾರಿಗೆ ತರಲಾಗಿದೆ.
ಈ ಯೋಜನೆಯಡಿ ಡ್ರೋನ್ & ಬಿಡಿಭಾಗಗಳ ವೆಚ್ಚದ ಶೇ.80ರಷ್ಟು ಅಥವಾ ಗರಿಷ್ಠ ರೂ.8 ಲಕ್ಷದವರೆಗೆ ಕೇಂದ್ರ ಸರ್ಕಾರವು ಮಹಿಳಾ ಸ್ವಸಹಾಯ ಸಂಘಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿದ್ದು, ಉಳಿದಂತಹ 20% ಪಾಲನ್ನು ಫಲಾನುಭವಿಗಳು ಭರಿಸಬೇಕಾಗಿರುತ್ತದೆ. ಇದಕ್ಕಾಗಿ Agricultural Infrastructure Fund ನಿಂದ 3% ಬಡ್ಡಿ ರಿಯಾಯಿತಿ ಸೇರಿದಂತೆ ಸಾಲ ಪಡೆಯಬಹುದಾಗಿರುತ್ತದೆ.

17. **ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ:** ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿ ಕೊಂಡಿಯೊಂದಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅನುದಾನವನ್ನು ನೀಡಲಾಗುತ್ತದೆ.

ವ್ಯಕ್ತಿಗತ ಕಿರು ಉದ್ದಿಮೆಗಳಿಗೆ ಬೆಂಬಲ, ರೈತ ಉತ್ಪಾದಕರ ಸಂಸ್ಥೆಗಳು/ ಉತ್ಪಾದಕ ಸೊಸೈಟಿಗಳಿಗೆ ಸಹಾಯಧನ, ಸ್ವಸಹಾಯ ಸಂಘಗಳ ಸದಸ್ಯರಿಗೆ ಕಾರ್ಯ ನಿರ್ವಹಣಾ ಬಂಡವಾಳ ಹಾಗೂ ಪರಿಕರಗಳ ಖರೀದಿಗೆ ಪ್ರಾಥಮಿಕ ಬಂಡವಾಳ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆಗೆ ಬೆಂಬಲ, ರಾಜ್ಯದ ತಾಂತ್ರಿಕ ಸಂಸ್ಥೆಗಳಲ್ಲಿ ಆಹಾರ ಸಂಸ್ಕರಣಾ ಉದ್ಯಮಿಗಳಿಗೆ ತರಬೇತಿ ನೀಡಲು ಹಾಗೂ ಪ್ರಾಯೋಗಿಕ ಉತ್ಪಾದನೆ ಕೈಗೊಳ್ಳಲು ಇನ್ ಕ್ಯುಬೇಷನ್ ಕೇಂದ್ರಗಳ ಸ್ಥಾಪನೆಗೆ ಅನುದಾನವನ್ನು ನೀಡಲಾಗುತ್ತದೆ.

ಅಪರ ಕೃಷಿ ನಿರ್ದೇಶಕರು
(ಸಾವಯವ ಕೃಷಿ)